ಪಿಡಬ್ಲೂ- 1

ಸಾಕ್ಷಿಗೆ ದಿನಾಂಕಃ 28.06.2023 ರಂದು ಪ್ರಮಾಣ ವಚನ ನೀಡಲಾಯಿತು.

ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರ ಶ್ರೀ ಎಂ ಎಸ್ ವಿ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ನನ್ನ ಪ್ರಮಾಣಪತ್ರ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರ ಸತ್ಯವಾಗಿದ್ದು, ಅದಕ್ಕೆ ನಾನೇ ಮಾಹಿತಿಯನ್ನು ವಕೀಲರಿಗೆ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಸಹಿ ನನ್ನದಾಗಿರುತ್ತದೆ.

1. ಆರೋಪಿಯು ನೀಡಿರುವ ಚೆಕ್ಕನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಮಂಡ್ಯ ಜಿಲ್ಲಾ, ಕೋ ಆಪರೇಟಿವ್ ಸೆಂಟರ್ ಬ್ಯಾಂಕ್‌ನವರು ನೀಡಿರುವ ಹಿಂಬರಹವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಎಂ ಡಿ ಸಿ ಸಿ ಬ್ಯಾಂಕ್ ನವರು ನೀಡಿರುವ ಹಿಂಬರಹವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಎಂ ಡಿ ಸಿ ಸಿ ಬ್ಯಾಂಕ್ ನವರು ನೀಡಿರುವ ಮೆಮೋವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-4 ಎಂದು ಗುರುತಿಸಲಾಯಿತು.

3. ವಕೀಲರ ಮೂಲಕ ಆರೋಪಿತನಿಗೆ ನೀಡಿರುವ ಲೀಗಲ್ **ನೋಟೀಸ್‌ನ ಕಛೇರಿಯ ಪ್ರತಿಯನ್ನು** ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಅಂಚೆ ರಶೀದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-6 ಎಂದು ಗುರುತಿಸಲಾಯಿತು. ಬಟವಡೆಯಾಗದೇ ಹಿಂದಿರುಗಿದ ಅಂಚೆ ಲಕೋಟೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-7 ಎಂದು ಗುರುತಿಸಲಾಯಿತು.

**ಆರೋಪಿತನು ನನಗೆ ಮೋಸ ಮಾಡುವ ಉದ್ದೇಶದಿಂದ ಚೆಕ್ಕನ್ನು ಕೊಟ್ಟಿದ್ದು** ಅವನ ವಿರುದ್ಧ **ಸೂಕ್ತ ಕಾನೂನು ಕ್ರಮ ತೆಗೆದುಕೊಂಡು ನನಗೆ** ಅವರಿಂದ **ಬರಬೇಕಾದ ಹಣವನ್ನು ಕೊಡಿಸಲು ವಿನಂತಿಸುತ್ತೇನೆ.**

ಮುಂದುವರಿದ ಮುಖ್ಯ ವಿಚಾರಣೆಗೆ ಪಿರ್ಯಾದುದಾರರ ಪರ ವಕೀಲರು ಸಮಯಾವಕಾಶ ಕೋರಿದ್ದು ಮುಂದುಡಲಾಯಿತು.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.**

ಸಾ.ಓ.ಹೇ.ಸ.ಒ.

2 ನೇ ಅಪರ ಸಿವಿಲ್ ಜೆಡ್ಜ್ ಮತ್ತು ಜೆಎಂಎಫ್‌ಸಿ,
ಪಾಂಡವಪುರ.